ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/11/ಇಸಿಎಸ್(2)/2016

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ. ಬೆಂಗಳೂರು – 1
ದಿನಾಂಕ: 28-03-2017

## ಸುತ್ತೋಲೆ

ವಿಷಯ: 2016 ರ ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ಮುಂದುವರೆದ ಮರುಮೌಲ್ಯಮಾಪನದ ಫಲಿತಾಂಶ ಪ್ರಕಟಿಸಿರುವ ಹಾಗೂ 2017ರ ಏಪ್ರಿಲ್/ಮೇ ಡಿಪ್ಲೋಮ ಥಿಯರಿ ಪರೀಕ್ಷೆಗಳ ಕ್ಯಾಂಡಿಡೇಟ್ ಲಿಸ್ಟ್ ಇಂದೀಕರಿಸುವ ಬಗ್ಗೆ

ಉಲ್ಲೇಖ: 1) ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/11/ಇಸಿಎಸ್(2)/2016 ದಿ:17-03-2017
2) ಸರ್ಕಾರಿ ಆದೇಶ ಸಂ:ಇಡಿ/57/ಟಿಪಿಇ/2013 ಬೆಂಗಳೂರು ದಿ: 17-04-2015

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2016ರ ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮುಂದುವರೆದ ಮರುಮೌಲ್ಯಮಾಪನದ ಫಲಿತಾಂಶವನ್ನು ದಿನಾಂಕ:24-03-2017 ರಂದು ಬಿಟಿಇ ಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲಾಗಿದೆ. ಪ್ರಯುಕ್ತ ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳು/ಉಪನ್ಯಾಸಕರು/ಪೋಷಕರ ಗಮನಕ್ಕೆ ತರಲು ಸಂಬಂಧಿಸಿದ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಮುಂದುವರೆದು, 2017ರ ಏಪ್ರಿಲ್/ಮೇ ತಿಂಗಳಲ್ಲಿ ಜರುಗುವ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳ ಕ್ಯಾಂಡಿಡೇಟ್ ಲಿಸ್ಟ್ ಅನ್ನು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಬಿಡುಗಡೆಗೊಳಿಸಲಾಗಿದ್ದು ಸಂಬಂಧಿಸಿದ ಸಂಸ್ಥೆಗಳು ಪಟ್ಟಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿರುವುದನ್ನು ಖಾತರಿಪಡಿಸಿಕೊಂಡು <u>ದಿನಾಂಕ:04-04-2017</u> ರೊಳಗೆ ತಿದ್ದುಪಡಿ/ಅಪ್‌ಡೇಟ್ ಮಾಡಲು ಮತ್ತು ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿಯನ್ನು ಸಹ ವೆಬ್‌ಪೋರ್ಟಲ್‌ನಲ್ಲಿ ಸಲ್ಲಿಸಲು ತಿಳಿಸಲಾಗಿದೆ.

ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಿನ್ಸಿಪಾಲರು/ ಉಪನ್ಯಾಸಕರುಗಳ ವಿವರ ಹಾಗೂ ಬೋಧಿಸುತ್ತಿರುವ ಪಠ್ಯವಿಷಯಗಳನ್ನು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನ Staff list ನಲ್ಲಿ ಇಂದೀಕರಿಸಲು ಅವಕಾಶ ಕಲ್ಪಿಸಲಾಗಿದ್ದು <u>ದಿ:04-04-2017</u> ರೊಳಗೆ ಇಂದೀಕರಿಸಲು ಸೂಚಿಸಲಾಗಿದೆ.

ಕ್ಯಾಂಡಿಡೇಟ್ ಲಿಸ್ಟ್, ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿ ಮತ್ತು Staff list ಗಳನ್ನು ನಿಗದಿತ ದಿನಾಂಕದೊಳಗೆ ಇಂದೀಕರಿಸುವಲ್ಲಿ ವಿಫಲವಾಗುವ/ ಲೋಪವೆಸಗುವ ಪ್ರಿನ್ಸಿಪಾಲರ ಮೇಲೆ ಉಲ್ಲೇಖಿತ ಸರ್ಕಾರಿ ಆದೇಶದನ್ವಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ

ಪ್ರತಿ: 1) ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಕಂಪ್ಯೂಟರ್ ವಿಭಾಗ – ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ